# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿನ ಪ್ರಶ್ನೆ ಸಂಖ್ಯೆ : **(1713)185**
ಸದಸ್ಯರ ಹೆಸರು : ಶ್ರೀ ಬಸನಗೌಡ ಬಾದರ್ಲಿ
(ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 23.03.2026
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ. ಸಂ | ಪ್ರಶ್ನೆ | ವಿವರ |
|---|---|---|
| ಅ) | ಸಿಂಧನೂರು ತಾಲ್ಲೂಕಿನಲ್ಲಿ ಪ್ರತಿ ವರ್ಷ ಸುಮಾರು 5-6 ಸಾವಿರ ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆಯನ್ನು ಬರೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸಿಂಧನೂರು ತಾಲ್ಲೂಕಿನಲ್ಲಿ ಕಳೆದ 04 ವರ್ಷಗಳಲ್ಲಿ ಈ ಕೆಳಕಂಡಂತೆ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳು ಪರೀಕ್ಷೆ ಬರೆದಿರುತ್ತಾರೆ;<br>**ವರ್ಷ** – **ವಿದ್ಯಾರ್ಥಿಗಳ ಸಂಖ್ಯೆ**<br>2021-22 – 5634<br>2022-23 – 5330<br>2023-24 – 5481<br>2024-25 – 5379<br><br>ಪ್ರಸಕ್ತ 2025-26ನೇ ಸಾಲಿನಲ್ಲಿ 5790 ವಿದ್ಯಾರ್ಥಿಗಳು ಎಸ್.ಎಸ್.ಎಲ್.ಸಿ ಪರೀಕ್ಷೆ ಬರೆಯಲು ನೋಂದಾಯಿಸಿಕೊಂಡಿರುತ್ತಾರೆ. |
| ಆ) | ಸಿಂಧನೂರು ತಾಲ್ಲೂಕು ಹೆಚ್ಚಿನ ಸಂಖ್ಯೆಯ ಶಿಕ್ಷಕರನ್ನು ಒಳಗೊಂಡಿದ್ದು, ಎಸ್.ಎಸ್.ಎಲ್.ಸಿ ಪರೀಕ್ಷೆ ಉತ್ತರ ಪತ್ರಿಕೆಗಳ ಮೌಲ್ಯಮಾಪನಕ್ಕಾಗಿ ದೂರ ಪ್ರಯಾಣದಿಂದ ಶಿಕ್ಷಕರಿಗೆ ಆಗುತ್ತಿರುವ ವೆಚ್ಚ ಮತ್ತು ಸಮಯ ನಷ್ಟದ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರತಿ ಜಿಲ್ಲೆಯಲ್ಲಿ ತಾಲ್ಲೂಕುಗಳಲ್ಲಿನ ವಿದ್ಯಾರ್ಥಿಗಳು, ಶಿಕ್ಷಕರು ಮತ್ತು ಶಾಲೆಗಳ ಸಂಖ್ಯೆಯು ಭಿನ್ನವಾಗಿದ್ದು, ಒಂದೊಂದು ತಾಲ್ಲೂಕಿನಲ್ಲಿ ಹೆಚ್ಚಿನ ಶಿಕ್ಷಕರು ಮತ್ತು ವಿದ್ಯಾರ್ಥಿಗಳನ್ನು ಹೊಂದಿದ್ದರೆ, ಕೆಲವೊಂದು ತಾಲ್ಲೂಕಿನಲ್ಲಿ ಕಡಿಮೆ ಪ್ರಮಾಣದಲ್ಲಿರುತ್ತದೆ.<br><br>ಮುಂದುವರೆದು, ಪರೀಕ್ಷಾ ಮೌಲ್ಯಮಾಪನಕ್ಕೆ ಅಗತ್ಯವಿರುವ ಕಟ್ಟಡ, ಮೂಲಸೌಲಭ್ಯ, ಭದ್ರತೆ ಹಾಗೂ ಇನ್ನಿತರ ತಾಂತ್ರಿಕ ಕಾರಣಗಳಿಂದಾಗಿ ಹಾಗೂ ಪ್ರತಿ ಜಿಲ್ಲೆಯಲ್ಲಿನ ಎಲ್ಲಾ ತಾಲ್ಲೂಕುಗಳಲ್ಲಿ ಪರೀಕ್ಷೆಗೆ ಹಾಜರಾದ ಒಟ್ಟು ವಿದ್ಯಾರ್ಥಿಗಳ ಉತ್ತರ ಪತ್ರಿಕೆಗಳ ಮೌಲ್ಯಮಾಪನ ಕಾರ್ಯದಲ್ಲಿ ಏಕರೂಪತೆ ಕಾಯ್ದುಕೊಳ್ಳುವ ದೃಷ್ಟಿಯಿಂದ ಪ್ರತಿ ವರ್ಷ ಜಿಲ್ಲಾ ಕೇಂದ್ರಗಳಲ್ಲಿ ಮಾತ್ರ ಮೌಲ್ಯಮಾಪನ ಕೇಂದ್ರಗಳನ್ನು ರಚಿಸಲಾಗುತ್ತದೆ.<br><br>ಅದರಂತೆ ಸಿಂಧನೂರು ತಾಲ್ಲೂಕಿನಲ್ಲಿ 384 ಸಂಖ್ಯೆ ಶಿಕ್ಷಕರು ಎಸ್.ಎಸ್.ಎಲ್.ಸಿ. ಪರೀಕ್ಷೆಯ ಉತ್ತರ ಪತ್ರಿಕೆಗಳ |

| | | |
|---|---|---|
| | | ಮೌಲ್ಯಮಾಪನ ಕಾರ್ಯಕ್ಕೆ ನೊಂದಾಯಿಸಿಕೊಂಡಿದ್ದು, ಸದರಿಯವರುಗಳು ಜಿಲ್ಲಾ ಕೇಂದ್ರದಲ್ಲಿಯೇ ಮೌಲ್ಯಮಾಪನ ಕಾರ್ಯವನ್ನು ಕೈಗೊಳ್ಳಬೇಕಾಗಿರುತ್ತದೆ. |
| ಇ) | ಬಂದಿದ್ದಲ್ಲಿ, ಎಸ್.ಎಸ್.ಎಲ್.ಸಿ ಮೌಲ್ಯಮಾಪನ ಕೇಂದ್ರವನ್ನು ಸಿಂಧನೂರಿನಲ್ಲಿ ಪ್ರಾರಂಭಿಸಲು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ; | ಎಸ್.ಎಸ್.ಎಲ್.ಸಿ. ಮೌಲ್ಯಮಾಪನ ಕೇಂದ್ರವನ್ನು ಸಿಂಧನೂರಿನಲ್ಲಿ ಪ್ರಾರಂಭಿಸುವ ಕುರಿತಂತೆ ಸಹ ನಿರ್ದೇಶಕರು(ಪರೀಕ್ಷೆ), ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ, ಅಪರ ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಇಲಾಖೆ, ಕಲಬುರಗಿ ವಿಭಾಗ, ಕಲಬುರಗಿ, ಇವರು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯನಿರ್ಣಯ ಮಂಡಲಿ (KSEAB), ಬೆಂಗಳೂರು ಇವರಿಗೆ ಪ್ರಸ್ತಾವನೆ ಸಲ್ಲಿಸಿದ್ದು, ಮಂಡಳಿಯು ಈ ಕುರಿತು ಪರಿಶೀಲಿಸಿದ್ದು, ಒಂದು ವೇಳೆ ಸಿಂಧನೂರು ತಾಲ್ಲೂಕಿನಲ್ಲಿ ಮೌಲ್ಯಮಾಪನ ಕೇಂದ್ರವನ್ನು ರಚಿಸಿದ್ದಲ್ಲಿ, ರಾಯಚೂರು ಜಿಲ್ಲೆಯ ಇನ್ನಿತರ ತಾಲ್ಲೂಕುಗಳ ಶಿಕ್ಷಕರಿಗೆ ಮೌಲ್ಯಮಾಪನ ಕೇಂದ್ರಕ್ಕೆ ಆಗಮಿಸಲು ಪ್ರಯಾಣದ ವೆಚ್ಚ ಮತ್ತು ದೂರದ ಸಮಸ್ಯೆಗಳನ್ನು ಒಳಗೊಂಡಂತೆ ಪರೀಕ್ಷಾ ಮೌಲ್ಯಮಾಪನಕ್ಕೆ ಅಗತ್ಯವಿರುವ ಕಟ್ಟಡ, ಮೂಲಸೌಲಭ್ಯ, ಭದ್ರತೆ ಹಾಗೂ ಇನ್ನಿತರ ತಾಂತ್ರಿಕ ಕಾರಣಗಳಿಂದಾಗಿ ಸಮಸ್ಯೆಗಳು ಎದುರಾಗುತ್ತವೆ. ಆದ್ದರಿಂದ, ಜಿಲ್ಲಾ ಕೇಂದ್ರವು ಜಿಲ್ಲೆಯ ಕೇಂದ್ರ ಸ್ಥಾನವಾಗಿರುವುದರಿಂದ (Head Quarters) ಜಿಲ್ಲೆಯ ಎಲ್ಲಾ ತಾಲ್ಲೂಕುಗಳ ಶಿಕ್ಷಕರು ಜಿಲ್ಲಾ ಕೇಂದ್ರಕ್ಕೆ ಪ್ರಯಾಣಿಸಲು ಸಾರಿಗೆ ಸೌಲಭ್ಯ ಸೇರಿದಂತೆ ಹೆಚ್ಚಿನ ಅನುಕೂಲಗಳನ್ನು ಮನಗಂಡು ಎಲ್ಲಾ ತಾಲ್ಲೂಕುಗಳ ಏಕರೂಪತೆಯ ದೃಷ್ಟಿಯಿಂದ ಸಿಂಧನೂರು ತಾಲ್ಲೂಕಿನಲ್ಲಿ ಎಸ್.ಎಸ್.ಎಲ್.ಸಿ ಮೌಲ್ಯಮಾಪನ ಕೇಂದ್ರವನ್ನು ಪ್ರಾರಂಭಿಸುವ ಪ್ರಸ್ತಾವನೆಯನ್ನು ಒಪ್ಪಿರುವುದಿಲ್ಲ. ಹಾಗೂ ಇಂತಹ ಪ್ರಸ್ತಾವನೆಯು ಸಹ ಸರ್ಕಾರದ ಮುಂದೆ ಇರುವುದಿಲ್ಲ. |
| ಈ) | ಇದ್ದಲ್ಲಿ ಪ್ರಸ್ತುತ ಯಾವ ಹಂತದಲ್ಲಿದೆ; ಹಾಗೂ ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕಿನಲ್ಲಿ ಎಸ್.ಎಸ್.ಎಲ್.ಸಿ ಮೌಲ್ಯಮಪನ ಕೇಂದ್ರವನ್ನು ಪ್ರಾರಂಭಿಸಲಾಗುವುದು.? | |

**ಸಂಖ್ಯೆ: ಇಪಿ 93 ಎಸ್ಇಎಸ್ 2026**

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು